## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಈ ಸಂಸ್ಥೆಗೆ 2019-20ನೇ ಸಾಲಿನ ಆಯವ್ಯಯದಲ್ಲಿ ಕಲ್ಪಿಸಲಾಗಿರುವ ಅನುದಾನದ ಪೈಕಿ ಮೊದಲನೇ ತ್ರೈಮಾಸಿಕ ಅವಧಿಗೆ ಅನುದಾನ ಬಿಡುಗಡೆ ಮಾಡುವ ಬಗ್ಗೆ.

ಓದಲಾಗಿದೆ:

1. ಸರ್ಕಾರದ ಆದೇಶ ಸಂಖ್ಯೆ: ವಾಕೈ 57 ಆಂಆಸ(2) 2019, ದಿನಾಂಕ:16/04/2019.
2. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕರು ಇವರ ಪ್ರಸ್ತಾವನೆ ಸಂಖ್ಯೆ: ಡಿಎಸ್‌ಕೆ/ಇಎಪಿ/50/2018-19/06, ದಿನಾಂಕ:02/04/2019.

ಪ್ರಸ್ತಾವನೆ:

ಮೇಲೆ ಓದಲಾದ ಕ್ರಮ ಸಂಖ್ಯೆ (1)ರ ಆದೇಶದಲ್ಲಿ 2019-20ನೇ ಸಾಲಿನಲ್ಲಿ ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆಯಡಿಯಲ್ಲಿ ಬರುವ ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯಕ್ಕೆ ಸಂಬಂಧಿಸಿದಂತೆ ಆಯವ್ಯಯದಲ್ಲಿನ ಯೋಜನಾ ಕಾರ್ಯಕ್ರಮಗಳಡಿಯಲ್ಲಿ ಮುಂದುವರಿದ ಕಾರ್ಯಕ್ರಮಗಳಿಗೆ ಅನುಬಂಧ-3ರಲ್ಲಿ ಸೂಚಿಸಿರುವ ಕಾರ್ಯಕ್ರಮಗಳನ್ನು ಅನುಷ್ಠಾನಗೊಳಿಸಲು ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶನಾಲಯ ಇವರಿಗೆ ಸದರಿ ಆದೇಶದಲ್ಲಿನ ಷರತ್ತುಗಳನ್ನು ಪಾಲಿಸಬೇಕೆಂದು ನಿಬಂಧನೆಯನ್ನು ವಿಧಿಸಿ ಅನುಮೋದನೆ ನೀಡಲಾಗಿರುತ್ತದೆ.

ಮೇಲೆ ಓದಲಾದ ಕ್ರಮ ಸಂಖ್ಯೆ (2)ರ ಆಯುಕ್ತರ ಪ್ರಸ್ತಾವನೆಯಲ್ಲಿ ಕೆಳಕಂಡ ಯೋಜನೆಗಳನ್ನು 2019-20ನೇ ಸಾಲಿಗೆ ಮುಂದುವರೆಸಿ ಆಡಳಿತಾತ್ಮಕ ಅನುಮೋದನೆ ನೀಡುವಂತೆ ಕೋರಿರುತ್ತಾರೆ.

2019-20ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ '2852-08-201-0-09(059)' ಅಡಿ ಭಾರತ ರತ್ನ ಸರ್.ಎಂ. ವಿಶ್ವೇಶ್ವರಯ್ಯ ಮತ್ತು ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಈ ಎರಡು ಸಂಸ್ಥೆಗಳಿಗೆ ಒಟ್ಟು ರೂ.200.00 ಲಕ್ಷಗಳ ಅನುದಾನ ಒದಗಿಸಲಾಗಿದೆ. ಈ ಅನುದಾನದ ಪೈಕಿ ಮೇಲೆ ಓದಲಾದ (1)ರ ಆದೇಶ ದಿನಾಂಕ:16/04/2019ರಲ್ಲಿ ಮುಂದುವರೆಸಲಾದ ಈ 2 ಸಂಸ್ಥೆಗಳ ಕಾರ್ಯ ಚಟುವಟಿಕೆಗಳನ್ನು ಕೈಗೊಳ್ಳಲು ಈ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಿ ಆದೇಶ ಹೊರಡಿಸಲಾಗಿದೆ. ಈ 2 ಸಂಸ್ಥೆಗಳ ಕ್ರಿಯಾ ಯೋಜನೆಗಳಿಗೆ ಸರ್ಕಾರದ ಅನುಮೋದನೆ ನೀಡಿ, 2019-20ನೇ ಸಾಲಿನಲ್ಲಿ ಒದಗಿಸಲಾದ ರೂ.200.00 ಲಕ್ಷಗಳನ್ನು ಈ ಕೆಳಕಂಡಂತೆ ಹಂಚಿಕೆ ಮಾಡಲಾಗಿದೆ.

| ಕ್ರ. ಸಂ. | ಯೋಜನೆಯ ವಿವರ ಮತ್ತು ಲೆಕ್ಕಶೀರ್ಷಿಕೆ | ಕಲ್ಪಿಸಲಾದ ಆಯವ್ಯಯ (ರೂ.ಲಕ್ಷಗಳಲ್ಲಿ) |
|---|---|---|
| 1. | ಶ್ರೀ ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ , '2852-08-201-0-09(059)' | 150.00 |
| 2. | ಭಾರತ ರತ್ನ ಸರ್.ಎಂ. ವಿಶ್ವೇಶ್ವರಯ್ಯ, ಕಬ್ಬು ಸಂಶೋಧನಾ ಸಂಸ್ಥೆ, ಸಾತನೂರು, ಮಂಡ್ಯ '2852-08-201-0-09(059)' | 50.00 |
| | | |
| | ಒಟ್ಟು | 200.00 |

ಈ ಹಿನ್ನೆಲೆಯಲ್ಲಿ, ಸದರಿ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಿ ಆಡಳಿತಾತ್ಮಕ ಅನುಮೋದನೆ ನೀಡಿ, ಮೊದಲನೇ ತ್ರೈಮಾಸಿಕ ಕಂತಿನ ಶೇ.25ರಷ್ಟು ಅಂದರೆ ರೂ.37.50ಲಕ್ಷಗಳ ಅನುದಾನವನ್ನು ಮುಂದುವರೆದ ಕ್ರಿಯಾ ಯೋಜನೆಗಳಿಗಾಗಿ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಈ ಸಂಸ್ಥೆಗೆ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿದೆ. ಅದರಂತೆ ಈ ಆದೇಶ.

**ಸರ್ಕಾರದ ಆದೇಶ ಸಂಖ್ಯೆ ವಾಕೈ 12 ಸಸಕಾ 2019, ಬೆಂಗಳೂರು, ದಿನಾಂಕ:25/04/2019.**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಇದರ ಉದ್ದೇಶಿತ ಕಾರ್ಯ ಚಟುವಟಿಕೆಗಳ ಯೋಜನೆಯನ್ನು 2019-20ನೇ ಸಾಲಿಗೆ ಮುಂದುವರೆಸಲು ಆಡಳಿತಾತ್ಮಕ

ಅನುಮೋದನೆ ನೀಡಿ, ಆಯವ್ಯಯದ ಲೆಕ್ಕಶೀರ್ಷಿಕೆ 2852-08-201-0-09(059) ಯೋಜನೆ ಅಡಿ ಒದಗಿಸಲಾಗಿರುವ ರೂ.200.00ಲಕ್ಷಗಳ ಅನುದಾನದಲ್ಲಿ ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಈ ಸಂಸ್ಥೆಗೆ ಹಂಚಿಕೆ ಮಾಡಿರುವ ರೂ.150.00ಲಕ್ಷಗಳ ಅನುದಾನದ ಪೈಕಿ ಪ್ರಸಕ್ತ ಸಾಲಿನ ಮೊದಲನೇ ತ್ರೈಮಾಸಿಕ ಕಂತಿನ ಅನುದಾನವಾಗಿ ರೂ.37.50 ಲಕ್ಷಗಳನ್ನು (ಮೂವತ್ತೇಳು ಲಕ್ಷದ ಐವತ್ತು ಸಾವಿರ ರೂಪಾಯಿಗಳು ಮಾತ್ರ) ಈ ಕೆಳಕಂಡ ಷರತ್ತುಗಳಿಗೊಳಪಟ್ಟು ಬಿಡುಗಡೆ ಮಾಡಿದೆ.

1) ಹಣವನ್ನು ಯಾವ ಉದ್ದೇಶಕ್ಕಾಗಿ ಬಿಡುಗಡೆ ಮಾಡಲಾಗಿದೆಯೋ ಅದೇ ಉದ್ದೇಶಕ್ಕಾಗಿ ಮಾತ್ರ ಬಳಸತಕ್ಕದ್ದು.

2) ಎರಡನೇ ತ್ರೈಮಾಸಿಕ ಕಂತಿನ ಅನುದಾನದ ಬಿಡುಗಡೆಗೆ ಪ್ರಸ್ತಾವನೆಯನ್ನು ಸಲ್ಲಿಸುವಾಗ ಮೊದಲನೇ ತ್ರೈಮಾಸಿಕ ಕಂತಿನಲ್ಲಿ ಬಿಡುಗಡೆ ಮಾಡಿದ ಅನುದಾನಕ್ಕೆ ಹಣ ಬಳಕೆ ಪ್ರಮಾಣ ಪತ್ರವನ್ನು ತಪ್ಪದೇ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.

3) ಪ್ರತಿ ವೆಚ್ಚಕ್ಕೆ ಸಂಬಂಧಿಸಿದಂತೆ ಅಂದಾಜು ಪಟ್ಟಿ ತಯಾರಿಸಿಕೊಂಡು ಸಕ್ಷಮ ಪ್ರಾಧಿಕಾರದಿಂದ ತಾಂತ್ರಿಕ ಮಂಜೂರಾತಿ ಮತ್ತು ಆಡಳಿತ ಅನುಮೋದನೆ ಪಡೆದುಕೊಳ್ಳುವುದು.

4) ಎಲ್ಲಾ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ನಿಯಮಗಳು, 2000 ಹಾಗೂ ತತ್ಸಂಬಂಧ ಆದೇಶ/ ಸುತ್ತೋಲೆಗಳನ್ನು ಕಟ್ಟುನಿಟ್ಟಾಗಿ ತಪ್ಪದೆ ಪಾಲಿಸತಕ್ಕದ್ದು.

ಹಣ ಸಂದಾಯದ ರಸೀದಿಯ ಮೇಲೆ ಆಯುಕ್ತರು, ಕಬ್ಬು ಅಭಿವೃದ್ಧಿ ಮತ್ತು ಸಕ್ಕರೆ ನಿರ್ದೇಶಕರ ಮೇಲು ರುಜು ಪಡೆದು ಸದರಿ ಹಣವನ್ನು ಡ್ರಾ ಮಾಡುವ ಅಧಿಕಾರವನ್ನು ನಿರ್ದೇಶಕರು, ಎಸ್.ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಬೆಳಗಾವಿ ಇವರಿಗೆ ನೀಡಲಾಗಿದೆ.

ಈ ಆದೇಶವನ್ನು ಆಂತರಿಕ ಆರ್ಥಿಕ ಸಲಹೆಗಾರರ ಆದೇಶ ಸಂಖ್ಯೆ: ವಾಕೈ 57 ಆಂಆಸ(2) 2019, ದಿನಾಂಕ:16/04/2019ರನ್ವಯ ಹಾಗೂ ಪ್ರಧಾನ ಕಾರ್ಯದರ್ಶಿ/ಕಾರ್ಯದರ್ಶಿಗಳಿಗೆ ಪ್ರತ್ಯಾಯೋಜಿಸಲಾಗಿರುವ ವಿತ್ತಾಧಿಕಾರದ ಮೇರೆಗೆ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ

(ಜೆ.ಶೀಲಾಬಾಯಿ)
ಸರ್ಕಾರದ ಅಧೀನ ಕಾರ್ಯದರ್ಶಿ (ಸಕ್ಕರೆ)
ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ

ಇವರಿಗೆ:
ಸಂಕಲನಕಾರರು, ಕರ್ನಾಟಕ ರಾಜ್ಯಪತ್ರ - ಮುಂದಿನ ರಾಜ್ಯ ಪತ್ರದಲ್ಲಿ ಪ್ರಕಟಿಸುವಂತೆ ಹಾಗೂ 25 ಪ್ರತಿಗಳನ್ನು ಒದಗಿಸುವಂತೆ ಕೋರಿದೆ.

ಪ್ರತಿ:
1. ಪ್ರಧಾನ ಮಹಾಲೇಖಪಾಲರು (ಜಿ & ಎಸ್ಎಸ್ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನA', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001
2. ಪ್ರಧಾನ ಮಹಾಲೇಖಪಾಲರು (ಇ & ಆರ್ ಎಸ್ ಎ) ಕರ್ನಾಟಕ, ಹೊಸ ಕಟ್ಟಡ, 'ಆಡಿಟ್ ಭವನA', ಅಂಚೆ ಪೆಟ್ಟಿಗೆ ಸಂಖ್ಯೆ: 5398, ಬೆಂಗಳೂರು-560 001
3. ಪ್ರಧಾನ ಮಹಾಲೇಖಪಾಲರು (ಎ & ಇ) ಕರ್ನಾಟಕ, ಪಾರ್ಕ್ ಹೌಸ್ ರಸ್ತೆ, ಅಂಚೆ ಪೆಟ್ಟಿಗೆ ಸಂಖ್ಯೆ: 5329, ಬೆಂಗಳೂರು-560 001
4. ಸರ್ಕಾರದ ಕಾರ್ಯದರ್ಶಿಯವರು, ಆರ್ಥಿಕ ಇಲಾಖೆ (ಬಿ & ಆರ್), ವಿಧಾನ ಸೌಧ, ಬೆಂಗಳೂರು.

5. ಆಯುಕ್ತರು, ಕಬ್ಬು ಅಭಿವೃದ್ಧಿ ಹಾಗೂ ಸಕ್ಕರೆ ನಿರ್ದೇಶಕ್ತರು, ಕರ್ನಾಟಕ ಗೃಹ ಮಂಡಳಿ ಕಾಂಪ್ಲೆಕ್ಸ್, 5ನೇ ಮಹಡಿ, "ಎಫ್" ಬ್ಲಾಕ್, ಕಾವೇರಿ ಭವನ, ಕೆ.ಜಿ.ರಸ್ತೆ, ಬೆಂಗಳೂರು-560009
6. ನಿರ್ದೇಶಕರು, ಎಸ್. ನಿಜಲಿಂಗಪ್ಪ ಸಕ್ಕರೆ ಸಂಸ್ಥೆ, ಸಿ.ಟಿ.ಎಸ್. ನಂ. 4125 / 1, ಬಿ. ಗಣೇಶಪುರ ರಸ್ತೆ, ಲಕ್ಷ್ಮೀಟೆಕ್, ಬೆಳಗಾವಿ - 590009
7. ನಿರ್ದೇಶಕರು, ಭಾರತ ರತ್ನ ಸರ್.ಎಂ.ವಿಶ್ವೇಶ್ವರಯ್ಯ ಕಬ್ಬು ಸಂಶೋಧನಾ ಸಂಸ್ಥೆ, ಸಾತನೂರು ಫಾರಂ, ಮಂಡ್ಯ ಜಿಲ್ಲೆ, ಮಂಡ್ಯ.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಆಪ್ತ ಕಾರ್ಯದರ್ಶಿ.
9. ಸರ್ಕಾರದ ಕಾರ್ಯದರ್ಶಿ, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ ಇವರ ಆಪ್ತ ಕಾರ್ಯದರ್ಶಿಯವರು
10. ಆಂತರಿಕ ಆರ್ಥಿಕ ಸಲಹೆಗಾರರು, ವಾಣಿಜ್ಯ ಮತ್ತು ಕೈಗಾರಿಕೆ ಇಲಾಖೆ, ವಿಕಾಸ ಸೌಧ, ಬೆಂಗಳೂರು.
11. ಸರ್ಕಾರದ ಉಪ ಕಾರ್ಯದರ್ಶಿ (ಸಕ್ಕರೆ), ವಾಣಿಜ್ಯ ಮತ್ತು ಕೈಗಾರಿಕಾ ಇಲಾಖೆ ಇವರ ಆಪ್ತ ಸಹಾಯಕರು.
12. ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
13. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ. ಖನಿಜ ಭವನ, ರೇಸ್ ಕೋರ್ಸ್ ರಸ್ತೆ, ಬೆಂಗಳೂರು
14. ಖಜಾನಾಧಿಕಾರಿಯವರು, ರಾಜ್ಯ ಹುಜೂರ್ ಖಜಾನೆ, ನೃಪತುಂಗ ರಸ್ತೆ, ಬೆಂಗಳೂರು.
15. ಖಜಾನಾಧಿಕಾರಿಯವರು, ಜಿಲ್ಲಾ ಖಜಾನೆ(ನಗರ), ನೃಪತುಂಗ ರಸ್ತೆ, ಬೆಂಗಳೂರು-560002.
16. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-1), ವಿಧಾನ ಸೌಧ, ಬೆಂಗಳೂರು.
17. ಸರ್ಕಾರದ ಅಧೀನ ಕಾರ್ಯದರ್ಶಿ, ಆರ್ಥಿಕ ಇಲಾಖೆ (ವೆಚ್ಚ-2 ಮತ್ತು 10)
18. ಶಾಖಾ ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.